# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನಕ್ಕಾಗಿ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಹಾಗೂ ನಿವೃತ್ತ/ಮರಣ ಹೊಂದಿದ ದಿನಗೂಲಿ/ಅವಲಂಬಿತರಿಗೆ ಒಂದು ಬಾರಿಯ ಉಪದಾನಕ್ಕಾಗಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚವನ್ನು ಭರಿಸಲು ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ: RDPR 553/SSK/2020, RDPR 535 SSK 2020 ಮತ್ತು RDPR 340 ZPS 2020

ಪ್ರಸ್ತಾವನೆ:

ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನಕ್ಕಾಗಿ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಹಾಗೂ ನಿವೃತ್ತ/ಮರಣ ಹೊಂದಿದ ದಿನಗೂಲಿ/ಅವಲಂಬಿತರಿಗೆ ಒಂದು ಬಾರಿಯ ಉಪದಾನಕ್ಕಾಗಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚವನ್ನು ಭರಿಸಲು ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ ಪ್ರಧಾನ ಲೆಕ್ಕ ಶೀರ್ಷಿಕೆ 2515ರ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ.61.97ಲಕ್ಷ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ರೂ.126.19ಲಕ್ಷ ಒಟ್ಟು ರೂ.188.16ಲಕ್ಷಗಳನ್ನು ಹೆಚ್ಚುವರಿಯಾಗಿ ಬಿಡುಗಡೆಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.61.97ಲಕ್ಷ ಮತ್ತು ತಾಲ್ಲೂಕು ಪಂಚಾಯತಿ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.126.19ಲಕ್ಷಗಳನ್ನು ಅನುಕ್ರಮವಾಗಿ ಲೆಕ್ಕ ಶೀರ್ಷಿಕೆ 2515-00-196-1-05-300 ಮತ್ತು 2515-00-197-1-10-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 439 ವೆಚ್ಚ 6/2021(ಇ) ದಿನಾಂಕ: 2ನೇ ಸೆಪ್ಟೆಂಬರ್ 2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಪ್ರಸಕ್ತ ಸಾಲಿನ ವೇತನ/ಸಂಭಾವನೆ/ಉಪದಾನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರನ್ವಯ ಕಾಲಂ 6ರಂತೆ ಒಟ್ಟು ರೂ.188.16ಲಕ್ಷ (ರೂಪಾಯಿ ಒಂದು ನೂರ ಎಂಬತ್ತೆಂಟು ಲಕ್ಷದ ಹದಿನಾರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಪ್ರಸ್ತಾವಿತ ಆಬ್ಜೆಕ್ಟ್ ಹೆಡ್ ಗಳಡಿ ಬಿಡುಗಡೆಗೊಳಿಸಿರುವ ಅನುದಾನಕ್ಕೆ ಮರು ಹೊಂದಾಣಿಕೆಯ ಅಗತ್ಯವಿರುವುದಿಲ್ಲ. ಕಾಲಂ 3ರ ಕಾರ್ಯಕ್ರಮದಡಿಯೇ ವೆಚ್ಚ ಭರಿಸತಕ್ಕದ್ದು.

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು. ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ

## ಸರ್ಕಾರದ ಆದೇಶ ಸಂಖ್ಯೆ: ಆಇ 439 ವೆಚ್ಚ 6/2021 (ಇ) ದಿನಾಂಕ:2.9.2021ಕ್ಕೆ ಅನುಬಂಧ

(ರೂ.ಲಕ್ಷಗಳಲ್ಲಿ)

| ಕಡತ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾಯ ಕ್ರಮದ ಲೆಕ್ಕ ಶೀಷಿ ಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| 1 | 2 | 3 | 4 | 5 | 6 |
| RDPR553SSK2020 | ಚಿಕ್ಕಬಳ್ಳಾಪುರ | 2059-00-101-0-26-251 | 1.97 | | 1.97 |
| RDPR340ZPS/2020 | ರಾಮನಗರ | 2515-00-101-0-26-034 | 60.00 | | 60.00 |
| | ಚನ್ನಪಟ್ಟಣ (9)<br>ಕನಕಪುರ (10)<br>ರಾಮನಗರ (8)<br>ಮಾಗಡಿ (7) | 2515-00-102-0-63-034 | | 13.00<br>11.00<br>19.00<br>12.00 | 55.00 |
| RDPR535SSK2020 | ಗೌರಿಬಿದನೂರು (6) | 2515-00-102-0-63-033<br>2515-00-102-0-63-034 | | 10.19<br>2.43 | 12.62 |
| | ಚಿಕ್ಕಬಳ್ಳಾಪುರ (5) | 2515-00-102-0-63-033 | | 7.80 | 7.80 |
| | ಕೊಪ್ಪಳ (4)<br>ಕುಷ್ಟಗಿ (2)<br>ಯಲಬುರ್ಗಾ (1)<br>ಗಂಗಾವತಿ (3) | 2515-00-102-0-63-033 | | 10.59<br>5.41<br>20.39<br>14.38 | 50.77 |
| | | **ಒಟ್ಟು** | **61.97** | **126.19** | **188.16** |

1416907171 3.9.21 | 1416907291

(ಶ್ರೀಕೃಷ್ಣ ಎನ್ ಬುಗಟ್ಯಾಗೋಳ್)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆಥಿ ಕ ಇಲಾಖೆ